ಎ-330-(7)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ರವರು ನಿಯಮ 330ರ ಅಡಿಯಲ್ಲಿ ನೀಡಿರುವ ಸೂಚನೆ ಮೇಲಿನ ಹೇಳಿಕೆ**

**ವಿಷಯ:-** ರಾಜ್ಯದಲ್ಲಿ ಮತ್ತು ಬೆಳಗಾವಿ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರನ್ನು ಪೂರೈಸುವ ಮಹತ್ವದ ಉದ್ದೇಶದಿಂದ ನೀರನ್ನು ಶುದ್ಧೀಕರಿಸುವ ಘಟಕಗಳನ್ನು ಸ್ಥಾಪಿಸಿದ್ದರೂ ಬಹಳ ಘಟಕಗಳು ಕಾರ್ಯ ನಿರ್ವಹಿಸದೇ ದುರಸ್ತಿ ಬಂದಿದ್ದು, ಈ ಘಟಕಗಳನ್ನು ಸರಿಪಡಿಸಲು ಕ್ರಮ ಜರುಗಿಸದಿರುವ ಬಗ್ಗೆ.

*******

**ಹೇಳಿಕೆ :-**

- ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಒಟ್ಟು 18763 ಶುದ್ಧ ಕುಡಿಯುವ ನೀರಿನ ಘಟಕಗಳ ಪೈಕಿ 1692 ನೀರು ಶುದ್ಧೀಕರಣ ಘಟಕಗಳು ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿರುವುದಿಲ್ಲ.
- ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 1329 ಶುದ್ಧ ಕುಡಿಯುವ ನೀರಿನ ಘಟಕಗಳ ಪೈಕಿ 96 ನೀರು ಶುದ್ಧೀಕರಣ ಘಟಕಗಳು ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿರುವುದಿಲ್ಲ.
- ತಾತ್ಕಾಲಿಕವಾಗಿ ದುರಸ್ಥಿಯಲ್ಲಿರುವ ಎಲ್ಲಾ ಘಟಕಗಳನ್ನು ಗ್ರಾ.ಕು.ನೀ&ನೈ ಇಲಾಖೆಯ ವತಿಯಿಂದ ಟಾಸ್ಕ್‌ಫೋರ್ಸ್ ಹಾಗೂ ಇಲಾಖೆಯ ಇತರೆ ಅನುದಾನದಡಿ ಮತ್ತು ಗ್ರಾಮ ಪಂಚಾಯತಿಯಲ್ಲಿ ಲಭ್ಯವಿರುವ ಅನುದಾನ ಬಳಸಿಕೊಂಡು ಸುಸ್ಥಿತಿಯಲ್ಲಿರಿಸಿ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ಕ್ರಮ ಜರುಗಿಸಲಾಗುತ್ತಿದೆ.
- Defect Liability Period ಮುಗಿಯುವುದರೊಳಗೆ ಕಾರ್ಯನಿರ್ವಹಿಸದೇ ಇದ್ದಲ್ಲಿ ಅಂತಹ ಘಟಕಗಳನ್ನು ಸ್ಥಾಪಿಸಿದ ಏಜೆನ್ಸಿಯವರು ಘಟಕಗಳನ್ನು ಸುಸ್ಥಿತಿಯಲ್ಲಿಡಲು ಕ್ರಮವಹಿಸದಿದ್ದಲ್ಲಿ, ಕರಾರಿನಂತೆ ನೋಟೀಸ್‌ಗಳನ್ನು ನೀಡಿ Rescind ಮಾಡಲಾಗುತ್ತಿದೆ ಹಾಗೂ ಸದರಿ ಘಟಕಗಳನ್ನು ನಿಯಮಾನುಸಾರ ಇಲಾಖಾ ವತಿಯಿಂದ ಸರಿಪಡಿಸಿ ಕಾರ್ಯನಿರ್ವಹಿಸುವಂತೆ ಕ್ರಮಜರುಗಿಸಲಾಗುತ್ತಿದೆ.
- ಶುದ್ಧ ಕುಡಿಯುವ ನೀರಿನ ಘಟಕಗಳು ಕ್ರಮಬದ್ಧವಾಗಿ ಕಾರ್ಯನಿರ್ವಹಿಸುವಂತೆ ಅನುವಾಗಲು ಅನುದಾನವನ್ನು ರಾಜ್ಯದ ವಂತಿಗೆಯಲ್ಲಿ ನಿಗಧಿಪಡಿಸಲಾಗಿದೆ. ಗ್ರಾಮ ಪಂಚಾಯಿತಿಗಳು 15ನೇ ಹಣಕಾಸಿನ ಆಯೋಗದಲ್ಲಿ ಲಭ್ಯವಿರುವ ಅನುದಾನ ಅಥವಾ ಗ್ರಾಮ ಪಂಚಾಯಿತಿ ಅನುದಾನವನ್ನು ಸಹ ಬಳಸಬಹುದಾಗಿರುತ್ತದೆ ಹಾಗೂ ಗ್ರಾ.ಕು.ನೀ & ನೈ ಇಲಾಖೆಯಿಂದ ಗ್ರಾಮ ಪಂಚಾಯಿತಿಗೆ ಹಸ್ತಾಂತರಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆಗಾಗಿ ಪ್ರತಿ ಘಟಕಕ್ಕೆ ತಿಂಗಳಿಗೆ ರೂ.3,000/-ಗಳಂತೆ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಕಡತ ಸಂ:ಗ್ರಾಕುನೀ&ನೈಇ 112 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು